ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ತೋಟಗಾರಿಕಾ ಬೆಳೆಗಳ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

913 (1028) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರವು ಯಾವ ಯಾವ ಬೆಳೆಗಳನ್ನು ತೋಟಗಾರಿಕಾ ಬೆಳೆಗಳೆಂದು ಪರಿಗಣಿಸಿದೆ; ಹಾಸನ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಉತ್ಪಾದಿಸುವ ಪ್ರದೇಶದ ವಿಸ್ತೀರ್ಣವೆಷ್ಟು; ಈ ಪ್ರದೇಶಗಳಲ್ಲಿ ಯಾವ ಯಾವ ಬೆಳೆಗಳನ್ನು ಎಷ್ಟು ಪ್ರಮಾಣದಲ್ಲಿ ಉತ್ಪಾದಿಸಲಾಗುತ್ತಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ತೋಟಗಾರಿಕಾ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳಿಗಾಗಿ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಮತ್ತು ಖರ್ಚಾದ ಅನುದಾನವೆಷ್ಟು; (ಈ ಯೋಜನೆಗಳ ಫಲಾನುಭವಿಗಳ ವಿವರಗಳೊಂದಿಗೆ ಯೋಜನೆವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ರೈತರು ಬೆಳೆಯುತ್ತಿರುವ ತೋಟಗಾರಿಕಾ ಬೆಳೆಗಳ ಸಂರಕ್ಷಣೆಗಾಗಿ ಹಾಸನ ಜಿಲ್ಲೆಯಲ್ಲಿ ಶೀಥಲೀಕರಣ ಸಂಗ್ರಹಗಾರಗಳ ನಿರ್ಮಾಣ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಅವುಗಳ ವಿವರಗಳೇನು ? (ಮಾಹಿತಿ ನೀಡುವುದು)